## ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ: ಕಾಶಿಇ 115 ಪ್ರಭಾರ 2017-18 ವ&ನಿ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:18-11-2017.

**ಇವರಿಗೆ,**

ಜಂಟಿ ನಿರ್ದೇಶಕರು,
ಕಾಲೇಜು ಶಿಕ್ಷಣ ಇಲಾಖೆ,
ಪ್ರಾದೇಶಿಕ ಕಛೇರಿ
ಮೈಸೂರು

ಮಾನ್ಯರೆ,

ವಿಷಯ: ವರ್ಗಾವಣೆಯಿಂದ ತೆರವಾದ ಪ್ರಭಾರ ಪ್ರಾಂಶುಪಾಲರ ಬದಲಿ ವ್ಯವಸ್ಥೆ ಮಾಡುವ ಬಗ್ಗೆ.

ಉಲ್ಲೇಖ: 1. ಈ ಕಛೇರಿಯ ಆದೇಶ ಸಂಖ್ಯೆ: ಕಾಶಿಇ/208/ವರ್ಗಾವಣೆ/17-18/ವ&ನಿ ದಿನಾಂಕ: 01/06/2017,14/06/2017 ಹಾಗೂ 01/07/2017

2. ಈ ಕಛೇರಿಯ ಆದೇಶ ಸಂಖ್ಯೆ: ಕಾಶಿಇ/15 ವರ್ಗಾವಣೆ/17-18, ವ&ನಿ ದಿನಾಂಕ: 11/08/2017.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ(1) ಹಾಗೂ (2)ರ ಆದೇಶಗಳಲ್ಲಿ 2017-18ನೇ ಸಾಲಿನ ವರ್ಗಾವಣೆಗಳನ್ನು ಮಾಡಿ ಆದೇಶಿಸಲಾಗಿದ್ದು, ಸದರಿ ವರ್ಗಾವಣೆಯಲ್ಲಿ ಈ ಕೆಳಕಂಡ ಕಾಲೇಜುಗಳಲ್ಲಿ ಪ್ರಭಾರ ಪ್ರಾಂಶುಪಾಲರಾಗಿದ್ದ ಪ್ರಾಧ್ಯಾಪಕರುಗಳು ಬೇರೆ ಕಾಲೇಜಿಗೆ ವರ್ಗಾವಣೆ ಹೊಂದಿರುತ್ತಾರೆ:

1. ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಹೆತ್ತೂರು
2. ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಸರಗೂರು
3. ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಕೊಣನೂರು
4. ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಹಳ್ಳಿಮೈಸೂರು

ಆದ ಕಾರಣ ಆಡಳಿತಾತ್ಮಕ ಹಿತದೃಷ್ಟಿಯಿಂದ ಸದರಿ ಕಾಲೇಜುಗಳ ಹತ್ತಿರವಿರುವ ಕಾಲೇಜುಗಳಿಂದ ಸೇವಾ ಜೇಷ್ಠತೆಯಲ್ಲಿ ಹಿರಿಯರಾದ (ಪರೀಕ್ಷಾರ್ಥ ಅವಧಿ ಘೋಷಣೆ ಆಗಿರುವ) ಉಪನ್ಯಾಸಕರನ್ನು ಪ್ರಭಾರ ಪ್ರಾಂಶುಪಾಲರಾಗಿ ನಿಯೋಜಿಸಿ, ಈ ಕಛೇರಿಗೆ ವರದಿ ನೀಡುವಂತೆ ಸೂಚಿಸಲಾಗಿದೆ.

ಮುಂದುವರೆದಂತೆ ಇತರ ಜಂಟಿ ನಿರ್ದೇಶಕರ ವ್ಯಾಪ್ತಿಯಲ್ಲಿ ಇದೇ ರೀತಿಯ ಪ್ರಕರಣಗಳು ಇದ್ದಲ್ಲಿ, ಮೇಲೆ ಸೂಚಿಸಿರುವಂತೆ ಸೂಕ್ತ ಕ್ರಮ ಜರುಗಿಸಿ ಈ ಕಛೇರಿಗೆ ಮಾಹಿತಿ ನೀಡುವಂತೆ

ತಿಳಿಸಲಾಗಿದೆ. ಈ ಸಂಬಂಧ ಪ್ರತ್ಯೇಕವಾಗಿ ಆದೇಶ ನೀಡಲಾಗುವುದಿಲ್ಲ ಎಂದು ಈ ಮೂಲಕ ತಿಳಿಸಿದೆ.

(ಟಿಪ್ಪಣಿ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)

ತಮ್ಮ ವಿಶ್ವಾಸಿ,

ಕಾಲೇಜು ಶಿಕ್ಷಣ ಮುಖ್ಯ ಆಡಳಿತಾಧಿಕಾರಿಗಳು

ಪ್ರತಿ ರವಾನೆ:

1. ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಗೆ - ಅಗತ್ಯ ಕ್ರಮಕ್ಕಾಗಿ
2. ಕಛೇರಿ ಪ್ರತಿ